ಪೊಲೀಸ್ ಇಲಾಖೆಯಲ್ಲಿ ಸಿಬ್ಬಂದಿ ವರ್ಗದವರ ಕರ್ತವ್ಯಲೋಪಗಳು

3270 - ಶ್ರೀ ನೀಲಕಂಠಪ್ಪ ಬಿ.ಆರ್. (ತರೀಕೆರೆ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1999-2000 ಮತ್ತು 2000-2001ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಮಾನತ್ತಿನಲ್ಲಿಟ್ಟಿರುವ ಸಬ್ ಇನ್ಸ್‌ಪೆಕ್ಟರ್ ಮತ್ತು ಇತರೆ ಸಿಬ್ಬಂದಿಗಳ ಸಂಖ್ಯೆ ಎಷ್ಟು? (ಹುದ್ದೆವಾರು ಮಾಹಿತಿ ಒದಗಿಸುವುದು)*

ಆ) *ಇವರನ್ನು ಅಮಾನತ್ತಿನಲ್ಲಿಡಲು ಕಾರಣಗಳೇನು?*

ಇ) *1999-2000 ಮತ್ತು 2000-2001ನೇ ಸಾಲುಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ವರ್ಗಾವಣೆ ಹೊಂದಿದ ಪೊಲೀಸ್ ಸಿಬ್ಬಂದಿಗಳ ಸಂಖ್ಯೆ ಎಷ್ಟು?*

ಈ) *ಈ ರೀತಿ ವರ್ಗಾವಣೆ ಹೊಂದಿರುವವರು ಯಾರು ಯಾರು? (ವಿವರ ಒದಗಿಸುವುದು)*

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :

ಅ) 1999-2000 ಮತ್ತು 2000-2001ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಮಾನತ್ತಿನಲ್ಲಿಡಲಾದ ಪೊಲೀಸ್ ಸಿಬ್ಬಂದಿ ಕುರಿತ ವಿವರಗಳು ಈ ಕೆಳಕಂಡಂತಿವೆ;

	1999-2000	2000-2001
ಪಿ.ಎಸ್.ಐ. ಗಳು	ಇಲ್ಲ	2
ಎ.ಎಸ್.ಐ.ಗಳು	4	ಇಲ್ಲ
ಹೆಚ್.ಸಿ.ಗಳು	4	2
ಪಿ.ಸಿ.ಗಳು	13	8
ದಲಾಯತರು	3	ಇಲ್ಲ
ಒಟ್ಟು	**24**	**12**

ಆ) ಪೊಲೀಸ್ ಸಿಬ್ಬಂದಿಗಳು ಕರ್ತವ್ಯದಲ್ಲಿ ಘೋರ ನಿರ್ಲಕ್ಷ್ಯತೆ, ಬೇಜವಾಬ್ದಾರಿತನ, ಕರ್ತವ್ಯ ಲೋಪ, ದುರ್ನಡತೆಯನ್ನು ಪ್ರದರ್ಶಿಸಿದ ಕಾರಣಕ್ಕಾಗಿ ಅಮಾನತ್ತಿನಲ್ಲಿಡಲಾಗಿದೆ.

ಇ) 1999-2000ನೇ ಸಾಲಿನಲ್ಲಿ ವರ್ಗಾವಣೆ ಮಾಡಿರುವುದಿಲ್ಲ ಮತ್ತು 2000-2001ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ 244 ಜನ ಪೊಲೀಸ್ ಸಿಬ್ಬಂದಿಗಳನ್ನು ವರ್ಗಾವಣೆ ಮಾಡಲಾಗಿದೆ.

ಈ) ವರ್ಗಾವಣೆ ಮಾಡಲಾದ ಸಿಬ್ಬಂದಿಗಳ ವಿವರ ಈ ಕೆಳಕಂಡಂತಿದೆ.

	1999-2000	2000-2001
ಪಿ.ಎಸ್.ಐ.ಗಳು	ಇಲ್ಲ	ಇಲ್ಲ
ಎ.ಎಸ್.ಐ.ಗಳು	ಇಲ್ಲ	28
ಹೆಚ್.ಸಿ. ಗಳು	ಇಲ್ಲ	63
ಪಿ.ಸಿ.ಗಳು	ಇಲ್ಲ	153
ಒಟ್ಟು	**ಇಲ್ಲ**	**244**

ನ್ಯಾಯ ಬೆಲೆ ಅಂಗಡಿಗಳ ಮಂಜೂರು

3271 - ಶ್ರೀ ನೀಲಕಂಠಪ್ಪ ಬಿ.ಆರ್. (ತರೀಕೆರೆ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವಾಗ ಅನುಸರಿಸಲಾಗುವ ನೀತಿ ನಿಯಮಗಳೇನು?

ಆ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಸಾಕಷ್ಟು ಪ್ರಮಾಣದಲ್ಲಿ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ರಾಜ್ಯದಲ್ಲಿ ಇರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು?

ಈ) ಇವುಗಳ ಪೈಕಿ ಆಹಾರ ಇಲಾಖೆಯು ನಡೆಸುತ್ತಿರುವ ಅಂಗಡಿಗಳ ಸಂಖ್ಯೆ ಎಷ್ಟು?

ಉ) ನಿರುದ್ಯೋಗ ಪದವೀಧರರು ನಡೆಸುತ್ತಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :

ಅ) ಕರ್ನಾಟಕ ಅಗತ್ಯ ವಸ್ತುಗಳ (ಸಾ.ವಿ.ಪ.) ನಿಯಂತ್ರಣ ಆದೇಶ 1992ರನ್ವಯ ನಿರ್ದಿಷ್ಟವಾದ ಸ್ಥಳಗಳಲ್ಲಿ ನ್ಯಾಯಬೆಲೆ ಅಂಗಡಿ ತೆರೆಯಲು ಅರ್ಜಿ ಆಹ್ವಾನಿಸಿ ಅರ್ಜಿಗಳನ್ನು ಪರಿಶೀಲಿಸಿ ಅರ್ಹತೆಯ ಹಾಗೂ ಆದ್ಯತೆಗಳನ್ವಯ ನ್ಯಾಯಬೆಲೆ ಅಂಗಡಿಯನ್ನು ಮಂಜೂರು ಮಾಡಬಹುದಾಗಿರುತ್ತದೆ.

ಆ) 1992ರಿಂದೀಚೆಗೆ ನಿಯಮಾವಳಿಗಳನ್ವಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಂಜೂರು ಮಾಡಲಾಗುತ್ತಿದೆ.

ಇ) ರಾಜ್ಯದಲ್ಲಿ ದಿನಾಂಕ 30.9.2000ಕ್ಕೆ ಇರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ - 20442

ಈ) ಯಾವುದೂ ಇಲ್ಲ.

ಉ) 1319.